ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ,

ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003

**Email Id: adpiqsection@gmail.com** **Phone No: 080-23460525**

ಸಂಖ್ಯೆ: ಕ್ಯೂ3/ಡಿಪಿಎಸ್‌ಇ/ಪರೀಕ್ಷೆ/ಡಿಸೆಂಬರ್-2022/ 01/2022-23 ದಿನಾಂಕ: 20/10/2022

## ಅಧಿಸೂಚನೆ

ವಿಷಯ:-ಡಿಸೆಂಬರ್-2022ರ ಮಾಹೆಯಲ್ಲಿ ನಡೆಯಲಿರುವ ಪ್ರಥಮ ಮತ್ತು ದ್ವಿತೀಯ ಡಿಪಿಎಸ್‌ಇ (ಡಿಪ್ಲಮೊ ಇನ್ ಪ್ರೀಸ್ಕೂಲ್ ಎಜುಕೇಷನ್) ಪೂರಕ ಪರೀಕ್ಷೆಗೆ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಿರುವ ಬಗ್ಗೆ.

********

2021-22ನೇ ಸಾಲಿನ ಪ್ರಥಮ ಮತ್ತು ದ್ವಿತೀಯ ಡಿಪಿಎಸ್‌ಇ ಪುನರಾವರ್ತಿತ ಅಭ್ಯರ್ಥಿಗಳಿಗೆ ಲಿಖಿತ (ಥಿಯರಿ) ಪೂರಕ ಪರೀಕ್ಷೆಯನ್ನು ಡಿಸೆಂಬರ್-2022ರ ಮಾಹೆಯಲ್ಲಿ ದಿನಾಂಕ:12/12/2022 ರಿಂದ ದಿನಾಂಕ:17/12/2022 ರವರೆಗೆ ನಡೆಸಲು ತೀರ್ಮಾನಿಸಲಾಗಿದೆ. ಡಿ.ಪಿ.ಎಸ್.ಇ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ Online ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವೇಳಾಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಸರ್ಕಾರಿ ಶಿಕ್ಷಕರ/ಶಿಕ್ಷಕಿಯರ ತರಬೇತಿ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಿಂದ ಹಾಜರಾಗುವ ಅನುತ್ತೀರ್ಣ ಅಭ್ಯರ್ಥಿಗಳ ವಿವರಗಳನ್ನು ಮಂಡಳಿಯ **https://sslc.karnataka.gov.in** ಜಾಲತಾಣದಲ್ಲಿ Other Exams portal / DPSE Examination ನಲ್ಲಿ Institute Login ಮೂಲಕ Upload ಮಾಡಲು ಸೂಚಿಸಿದೆ.

1. ಪರೀಕ್ಷಾ ಶುಲ್ಕದ ವಿವರ:-

| ಕ್ರಮ ಸಂಖ್ಯೆ | ಪರೀಕ್ಷೆ | ಒಟ್ಟು ಶುಲ್ಕ |
|---|---|---|
| 01 | ಒಂದು ವಿಷಯಕ್ಕೆ | 300-00 |
| 02 | ಎರಡು ವಿಷಯಗಳಿಗೆ | 600-00 |
| 03 | ಮೂರು ವಿಷಯಗಳಿಗೆ | 1080-00 |

(ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಪ್ರವರ್ಗ1 ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕ ವಿನಾಯಿತಿ ಇದೆ)

2. ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ

- ಅಭ್ಯರ್ಥಿಗಳ ಪರೀಕ್ಷಾ ಅರ್ಜಿಯನ್ನು ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ಮಂಡಳಿಯ ಜಾಲತಾಣದಲ್ಲಿ, ತಮ್ಮ ಸಂಸ್ಥೆಯ Login ಮೂಲಕ Upload ಮಾಡಬೇಕು. ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆವಾರು ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಪಟ್ಟಂತೆ ಆನ್‌ಲೈನ್‌ನಲ್ಲಿ ಪಾವತಿಸಲು ವ್ಯವಸ್ಥೆ ಮಾಡಲಾಗಿದೆ.

- ಆನ್‌ಲೈನ್ ಚಲನ್ ಹೊರತುಪಡಿಸಿ ಮತ್ಯಾವುದೇ ಚಲನ್, ಡಿ.ಡಿ, ಚೆಕ್ ಮೂಲಕ ಮಾಡಲಾದ ಪಾವತಿಗಳನ್ನು ಮಾನ್ಯ ಮಾಡಲಾಗುವುದಿಲ್ಲ. ಅಭ್ಯರ್ಥಿಗಳ ಶುಲ್ಕವನ್ನು ನಿಗದಿತ ದಿನಾಂಕದ ನಂತರ ಚಲನ್ ಮೂಲಕ ಪಾವತಿಸಿದಲ್ಲಿ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಹಾಗೂ ಪರೀಕ್ಷಾ ಶುಲ್ಕವನ್ನು ಪಾವತಿಸಿದ್ದರೂ ಸಹ ಹಿಂದಿರುಗಿಸಲಾಗುವುದಿಲ್ಲ.
- ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಿರುವ ಬಗ್ಗೆ ಆನ್ ಲೈನ್ ರಶೀದಿಯ ಪ್ರತಿಯನ್ನು ಅರ್ಜಿಯ ಜೊತೆಯಲ್ಲಿ ಡಯಟ್ ಮೂಲಕ ಮಂಡಳಿಗೆ ಸಲ್ಲಿಸಬೇಕು.
- ಮಂಡಳಿ ನಿಗದಿಪಡಿಸಿದ ಕೊನೆಯ ದಿನಾಂಕಗಳು ಸರ್ಕಾರಿ ರಜಾ ದಿನವೆಂದು ಘೋಷಿಸಿದ್ದಲ್ಲಿ ಆ ದಿನದ ಮಾರನೆಯ ಕೆಲಸದ ದಿನವನ್ನು ಕೊನೆಯ ದಿನವೆಂದು ಪರಿಗಣಿಸಲಾಗುವುದು.

## 3. ಅರ್ಜಿಗಳನ್ನು ಸಲ್ಲಿಸಲು ನಿಗದಿಗೊಳಿಸಿರುವ ದಿನಾಂಕಗಳ ವಿವರ.

| ಕ್ರ.ಸಂ | ವಿವರ | ದಿನಾಂಕ: |
|---|---|---|
| **01** | ಅಭ್ಯರ್ಥಿಗಳಿಂದ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ ಅಧಿಸೂಚನೆ ಮತ್ತು ವೇಳಾಪಟ್ಟಿ ಪ್ರಕಟಿಸುವ ದಿನಾಂಕ | **16/11/2022** |
| **02** | ಪರೀಕ್ಷಾ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಪ್ರಾರಂಭ ದಿನಾಂಕ | **16/11/2022** |
| **03** | ಪರೀಕ್ಷಾ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕ | **21/11/2022** |
| **04** | ಡಿಸೆಂಬರ್–22ರ ಡಿ.ಪಿ.ಎಸ್.ಇ ಪರೀಕ್ಷೆಗೆ ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಪ್ರಾರಂಭಿಕ ದಿನಾಂಕ | **23/11/2022** |
| **05** | ಡಿಸೆಂಬರ್–22ರ ಡಿ.ಪಿ.ಎಸ್.ಇ ಪರೀಕ್ಷೆಗೆ ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ | **24/11/2022** |
| **06** | ಡಯಟ್‌ನಿಂದ ಅರ್ಜಿಗಳನ್ನು ಅನುಮೋದಿಸಲು ಕೊನೆಯ ದಿನಾಂಕ | **25/11/2022** |
| **07** | ನಾಮಿನಲ್ ರೋಲ್, ಶುಲ್ಕ ಪಾವತಿಸಿದ ಮೂಲ ಆನ್‌ಲೈನ್ ಚಲನ್ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಸಂಸ್ಥೆಗಳಿಂದ ಡಯಟ್‌ಗೆ ಸಲ್ಲಿಸಲು ಕೊನೆಯ ದಿನಾಂಕ | **25/11/2022** |
| **08** | ಪ್ರವೇಶ ಪತ್ರ ಆನ್‌ಲೈನ್ ನಲ್ಲಿ ಪ್ರಕಟಿಸುವ ದಿನಾಂಕ | **05/12/2022** |
| **09** | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಎ.ಎಂ.ಎಲ್, ಸಿ.ಎನ್.ಆರ್ ಮತ್ತು ನಾಮಿನಲ್ ರೋಲ್‌ಗಳನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ | **08/12/2022** |
| **10** | ಪರೀಕ್ಷೆ ಪ್ರಾರಂಭ ದಿನಾಂಕ | **12/12/2022** |

## 4. ಅರ್ಜಿಗಳನ್ನು ಸಲ್ಲಿಸಲು ಸಂಸ್ಥೆಯ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:

1 ಡಿಸೆಂಬರ್–2022 ಪ್ರಥಮ/ದ್ವಿತೀಯ ಡಿಪಿಎಸ್‌ಇ ಪೂರಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೊಂದಣಿ ಮಾಹಿತಿಯನ್ನು ಮಂಡಳಿಯ ಜಾಲತಾಣದಲ್ಲಿ Other Exams portal/DPSE Examination ಮೂಲಕ ಸಂಸ್ಥೆಯ Login ನಲ್ಲಿ Upload ಮಾಡಲು ಸೂಚಿಸಿದೆ.

2 ಪತ್ರ ವ್ಯವಹಾರಕ್ಕೆ ಅನುಕೂಲಕರವಾದ ಅಂಚೆ ವಿಳಾಸ, ದೂರವಾಣಿ ಸಂಖ್ಯೆ ಅಥವಾ ಮೊಬೈಲ್ ಫೋನ್ ಸಂಖ್ಯೆ ಹಾಗೂ E-Mail ವಿಳಾಸ ತಪ್ಪದೆ ನಮೂದಿಸುವುದು.

3 ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಪ್ರವರ್ಗ-1ರ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಬಯಸಿದ್ದಲ್ಲಿ ಜಾತಿ ಪ್ರಮಾಣ ಪತ್ರದ **RD** ಸಂಖ್ಯೆಯನ್ನು ಕಡ್ಡಾಯವಾಗಿ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕು. ಹಾಗೂ /ಪ್ರವರ್ಗ1 ಅಭ್ಯರ್ಥಿಗಳು ಶುಲ್ಕ ವಿನಾಯಿತಿ ಬಯಸಿದ್ದಲ್ಲಿ ರೂ. **1.00** ಲಕ್ಷದವರೆಗಿನ ಆದಾಯಮಿತಿ ಹೊಂದಿರಬೇಕು. ಅದಕ್ಕೆ ಸಂಬಂಧಿಸಿದ ಜಾತಿ ಮತ್ತು ಆದಾಯ ಪ್ರಮಾಣಪತ್ರದ **RD** ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಬೇಕು.

4 ಸಂಸ್ಥೆಯ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ನಾಮಯಾದಿ ಪಟ್ಟಿಯನ್ನು(Nominal Roll) Down load ಮಾಡಿಕೊಂಡು ಪರಿಶೀಲಿಸಿ ಶುಲ್ಕ ಪಾವತಿಸಿದ ಮೂಲ ಚಲನ್‌ನೊಂದಿಗೆ ಡಯಟ್‌ಗಳಿಗೆ ಸಲ್ಲಿಸುವುದು.

5 ಮೇಲಿನ ಎಲ್ಲಾ ನಿಯಮಗಳನ್ನು ಸಂಬಂದಪಟ್ಟ ಡಿಪಿಎಸ್.ಇ ಸಂಸ್ಥೆಯ ಮುಖ್ಯಸ್ಥರು ತಪ್ಪದೆ ಪಾಲಿಸಲು ತಿಳಿಸಿದೆ. ನಿಯಮಗಳನ್ನು ಪಾಲಿಸದೇ ಇದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಮುಖ್ಯಸ್ಥರನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು

**5. ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ಬರಹಗಾರರ ಮತ್ತು ಹೆಚ್ಚಿನ ಕಾಲಾವಕಾಶ ನೀಡುವ ಬಗ್ಗೆ.**

ವಿಭಿನ್ನ ಸಾಮರ್ಥ್ಯವುಳ್ಳ (Differently Abled) ವಿಕಲಚೇತನ ಅಭ್ಯರ್ಥಿಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಇಡಿ98/ಇಎಸ್‌ಡಬ್ಲ್ಯೂ2009 ದಿನಾಂಕ:10.06.2009ರಲ್ಲಿ ಸರ್ಕಾರವು ವಿಧಿಸಿರುವ ಷರತ್ತುಗಳನ್ವಯ ಅಂಗವೈಕಲ್ಯತೆ ಹೊಂದಿರುವ ಅಭ್ಯರ್ಥಿಗಳಿಗೆ ಹೆಚ್ಚಿನ ಕಾಲಾವಕಾಶ ಮತ್ತು ಬರಹಗಾರರ ಸೌಲಭ್ಯಗಳನ್ನು ನೀಡುವ ಬಗ್ಗೆ ಜಿಲ್ಲಾ ಡಯಟ್ ಪ್ರಾಂಶುಪಾಲರ ಹಂತದಲ್ಲಿ ಕ್ರಮಕೈಗೊಳ್ಳುವುದು. ಸರ್ಕಾರಿ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು. ಯಾವುದೇ ವ್ಯತ್ಯಾಸವಾದಲ್ಲಿ ಜಿಲ್ಲಾ ಡಯಟ್ ಪ್ರಾಂಶುಪಾಲರನ್ನು ನೇರಹೊಣೆಗಾರರನ್ನಾಗಿ ಮಾಡಲಾಗುವುದು.

**6. ಪ್ರಥಮ ಮತ್ತು ದ್ವಿತೀಯ ಡಿಪಿಎಸ್‌ಇ ಪಠ್ಯಕ್ರಮದನ್ವಯ ಬಾಹ್ಯ ಪರೀಕ್ಷೆಗೆ ವಿಷಯಗಳ ವಿವರ ನಿಗಧಿಪಡಿಸಲಾಗಿರುವ ಗರಿಷ್ಠ ಅಂಕಗಳು ಹಾಗೂ ಅವಧಿ.**

**ಪ್ರಥಮ ಡಿ.ಪಿ.ಎಸ್.ಇ**

| ವಿಷಯ | ವಿಷಯ ಸಂಕೇತ ಮತ್ತು ಪಠ್ಯವಸ್ತು | ಗರಿಷ್ಠ ಅಂಕಗಳು | ನಿಗಧಿಪಡಿಸಲಾದ ಅವಧಿ |
|---|---|---|---|
| Foundations of ECE | 1001 X | 100 | 3 ಘಂಟೆ |
| Psychology of child development | 1002 X | 100 | 3 ಘಂಟೆ |
| Methods and Strategies of ECE | 1003 X | 100 | 3 ಘಂಟೆ |

**ದ್ವಿತೀಯ ಡಿ.ಪಿ.ಎಸ್.ಇ**

| ವಿಷಯ | ವಿಷಯ ಸಂಕೇತ ಮತ್ತು ಪಠ್ಯವಸ್ತು | ಗರಿಷ್ಠ ಅಂಕಗಳು | ನಿಗಧಿಪಡಿಸಲಾದ ಅವಧಿ |
|---|---|---|---|
| Organisation and Management of PreSchools | 2001 X | 100 | 3 ಘಂಟೆ |
| Management Of child health and nutrition | 2002 X | 100 | 3 ಘಂಟೆ |
| Inclusive and value education | 2003 X | 100 | 3 ಘಂಟೆ |

ಡಯಟ್ ಪ್ರಾಂಶುಪಾಲರು ತಮ್ಮ ಜಿಲ್ಲೆಯಲ್ಲಿರುವ ಡಿಪಿಎಸ್ಇ ಕಾಲೇಜ್‌ನಿಂದ ಸಲ್ಲಿಸಿರುವ ನಾಮಯಾದಿ ಪಟ್ಟಿಯನ್ನು ತಮ್ಮ ಹಂತದಲ್ಲಿ ರಕ್ಷಿಸಿಡುವುದು ಹಾಗೂ ಮಂಡಳಿಯಿಂದ ಕೇಳಿದಾಗ ಅದನ್ನು ಮಂಡಳಿಗೆ ಸಲ್ಲಿಸುವುದು.

- ಡಯಟ್ ಹಂತದಲ್ಲಿ ಶಿಕ್ಷಕರ ತರಬೇತಿ ಸಂಸ್ಥೆಗಳಿಂದ ಪರೀಕ್ಷಾ ಶುಲ್ಕದ ಚಲನ್ ಪರಿಶೀಲಿಸಿ ಮಂಡಳಿಗೆ ಕಳುಹಿಸುವುದು.
- ಅರ್ಜಿ ಸಲ್ಲಿಕೆ ಮುಕ್ತಾಯವಾದ ನಂತರ ಮಂಡಳಿಯ ಹಂತದಲ್ಲಿ ಪರಿಶೀಲಿಸಿ ಸಂಸ್ಥೆಯ Loginಗೆ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು Upload ಮಾಡಲಾಗುವುದು.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಮನಿಸಿ ಡಯಟ್ ಪ್ರಾಂಶುಪಾಲರು ಹಾಗೂ ಸಂಸ್ಥೆಯ ಮುಖ್ಯಸ್ಥರು ಅಗತ್ಯ ಕ್ರಮವಹಿಸಲು ತಿಳಿಸಿದೆ.

<u>ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿವರ</u>

**1.ಶ್ರೀಮತಿ, ಟಿ.ಡಿ.ಶೈಲ ಸಹಾಯಕ ನಿರ್ದೇಶಕರು, ಡಿಇಡಿ ಶಾಖೆ, ಮೊಬೈಲ್ ಸಂಖ್ಯೆ:9480343741**

**2.ಶ್ರೀ, ರಿಯಾಜ್, ಸಹಾಯಕ ನಿರ್ದೇಶಕರು, ಗಣಕಶಾಖೆ ಮೊಬೈಲ್ ಸಂಖ್ಯೆ:7892195954**

25/10/2022

(ಹೆಚ್. ಎನ್.ಗೋಪಾಲ ಕೃಷ್ಣ)
ನಿರ್ದೇಶಕರು, ಪರೀಕ್ಷೆಗಳು
ಕ.ಪ್ರೌ.ಶಿ.ಪ.ಮಂಡಳಿ, ಬೆಂಗಳೂರು.

<u>ಪ್ರತಿಗಳು :-</u>

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ನಿರ್ದೇಶಕರು(ಪರೀಕ್ಷೆಗಳು). ಹಾಗೂ ಕಾರ್ಯದರ್ಶಿಗಳ ಆಪ್ತ ಶಾಖೆಗೆ.
3. ರಾಜ್ಯದ ವಿಭಾಗೀಯ ಮಟ್ಟದ ಪ್ರಾದೇಶಿಕ ಪರೀಕ್ಷಾ ಮಂಡಳಿಯ ಕಾರ್ಯದರ್ಶಿಗಳಿಗೆ ಬೆಂಗಳೂರು, ಮತ್ತು ಕಲ್ಬುರ್ಗಿ ವಿಭಾಗ ರವರಿಗೆ ಮುಂದಿನ ಕ್ರಮಕ್ಕಾಗಿ.
4. ಚಿತ್ರದುರ್ಗ ಮತ್ತು ಕಲಬುರಗಿ ಡಯಟ್ ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆಯವರಿಗೆ ಸಂಬಂಧಪಟ್ಟ ಅಧಿಸೂಚನೆಯನ್ನು ವೆಬ್ ಸೈಟ್‌ನಲ್ಲಿ ಅಳವಡಿಸಲು ಸಲ್ಲಿಸಿದೆ.
6. ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ.
7. ಕಛೇರಿ ಪ್ರತಿ.